ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

[ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು]

ಅಂಗೀಕಾರ ಪ್ರಸ್ತಾವ

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಸಿ.ಎಂ.ಆರ್. ವಿಶ್ವವಿದ್ಯಾಲಯ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ. ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು)

3. ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ

ಸಾಲಿನ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿ–ಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಈಗ ಪರ್ಯಾಲೋಚನಾ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

"ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ನ್ಯೂ ಬಾಲ್ಡ್‌ವಿನ್. ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆ ಪರ್ಯಾಲೋಚಿಸುತ್ತದೆ" ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.
(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು)

ಈಗ ವಿಧೇಯಕವನ್ನು ಖಂಡಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ 2 ರಿಂದ 61 ರವರೆಗೆ

ಅಧ್ಯಕ್ಷರು : 2 ರಿಂದ 61 ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

2 ರಿಂದ 61 ರವರೆಗಿನ ಖಂಡಗಳು (ಎರಡೂ ಸೇರಿದಂತೆ) ವಿಧೇಯಕದ ಅಂಗವಾದವು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(2 ರಿಂದ 61 ರವರೆಗಿನ ಖಂಡಗಳು ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು:– ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

[ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು]

ಅಂಗೀಕಾರ ಪ್ರಸ್ತಾವ

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು)

4. ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಅಧ್ಯಕ್ಷರು: ಮಾನ್ಯ ಸಚಿವರು ಪರ್ಯಾಲೋಚನಾ ಪ್ರಸ್ತಾವವನ್ನು ಮಂಡಿಸುವುದು.

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯದ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಶ್ರೀ ಟಿ.ಬಿ.ಜಯಚಂದ್ರ : ಈ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ಬ್ಯಾಕ್‌ಗ್ರೌಂಡ್– ಅನ್ನಾದರೂ ಹೇಳಿ, ಯಾರು, ಏನು ಮಾಡುತ್ತಿದ್ದಾರೆ ಎನ್ನುವುದನ್ನಾದರೂ ಹೇಳಿ. ಒಂದು ಬಿಲ್‌ಅನ್ನು ಸದನದಲ್ಲಿ ತಂದಾಗ ಅದಕ್ಕೆ objects and reasons ಇರುತ್ತದೆ. ಇದು ಹೊಸದಾಗಿ ತಂದಿರುವುದರಿಂದ ಇದರ ಬ್ಯಾಕ್‌ಗ್ರೌಂಡ್ ಹೇಳಬೇಕು. ಈಗ ನ್ಯೂ ಬಾಲ್ಡ್‌ವಿನ್ ವಿಶ್ವವಿದ್ಯಾಲಯ ವಿಧೇಯಕಕ್ಕೆ ಒಪ್ಪಿಗೆ ಕೊಟ್ಟೆವು. ಇಲ್ಲಿ ಸತ್ಯನಾರಾಯಣ ಎಜುಕೇಷನ್ ಟ್ರಸ್ಟ್ ಎಂದು ಇದೆ. ಸತ್ಯನಾರಾಯಣನಿಗೂ ನಮಗೆ ಬಾಲ್ಡ್‌ವಿನ್‌ಗೂ ಹೇಗೆ ಸಂಬಂಧ ಎನ್ನುವುದು ಅರ್ಥವಾಗಲಿಲ್ಲ. ಒಬ್ಬರಿಗೊಬ್ಬರಿಗೆ ಸಂಬಂಧ ಹೇಗಿದೆ ಎನ್ನುವುದನ್ನು ಸ್ವಲ್ಪ ಹೇಳಿ. ಪ್ರೆಸಿಡೆನ್ಸಿ ಎಂದರೆ ಯಾರು, ಏನು ಕತೆ ಎನ್ನುವುದನ್ನು ಹೇಳಿ.

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): A.H.Memorial Education Trust ಎನ್ನುವುದಿದ್ದು ನಿಸಾರ್ ಅಹಮದ್ ಎನ್ನುವವರು ಈ ಟ್ರಸ್ಟಿನ ಅಧ್ಯಕ್ಷರಾಗಿದ್ದಾರೆ. 52 ಎಕರೆ 16 ಗುಂಟೆ ಜಾಗದಲ್ಲಿ ಬೆಂಗಳೂರು ಉತ್ತರ ತಾಲ್ಲೂಕಿನ ಹೆಸರಘಟ್ಟ ಹೋಬಳಿಯ ಇಟಗಾಲಪುರದಲ್ಲಿ ಈ ಒಂದು ಯೂನಿವರ್ಸಿಟಿಯನ್ನು ಸ್ಥಾಪಿಸುವಂಥ ಉದ್ದೇಶವನ್ನು ಹೊಂದಿದ್ದಾರೆ. ಕಳೆದ 28 ವರ್ಷಗಳ ಹಿಂದೆ ಈ ಸಂಸ್ಥೆ ಪ್ರಾರಂಭವಾಗಿದೆ. 15 ಸಾವಿರ ಜನ